**All India Radio: Bangalore**
**National Bulletin In Kannada**
**23.08.2024 01.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.08.2024 01.10 p.m.**

*******************

**ಮುಖ್ಯಾಂಶಗಳು**

1. **ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತದ ಸಾಧನೆ ಹೆಮ್ಮೆಯ ವಿಷಯ – ರಾಷ್ಟ್ರಪತಿ ದ್ರೌಪದಿ ಮುರ್ಮು**
2. **ಉಕ್ರೇನ್‌ನಲ್ಲಿ ಶಾಂತಿ, ಸ್ಥಿರತೆ ಶೀಘ್ರ ಮರಳುವಿಕೆಗೆ ಭಾರತದ ಆಶಯ; ರಾಜಧಾನಿ ಕೀವ್ ತಲುಪಿದ ಪ್ರಧಾನಿ ಮೋದಿ**
3. **ಭಾರತ–ಅಮೆರಿಕಾ ಸಹಜ ಮಿತ್ರ ರಾಷ್ಟ್ರಗಳು – ರಕ್ಷಣಾ ಸಚಿವ ರಾಜನಾಥ್ ಸಿಂಗ್**
4. **ಅಮೆರಿಕಾದಲ್ಲಿ, ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ನಾಮನಿರ್ದೇಶನಕ್ಕೆ ಕಮಲಾ ಹ್ಯಾರೀಸ್ ಅಂಗೀಕಾರ**

***************

ದೇಶಾದ್ಯಂತ ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಿಸಲಾಗುತ್ತಿದೆ. ಕಳೆದ ವರ್ಷ ಇದೇ ದಿನದಂದು ಭಾರತ, ಚಂದ್ರಯಾನ–3 ಯೋಜನೆಯಡಿ ಚಂದ್ರನ ದಕ್ಷಿಣ ಭಾಗದಲ್ಲಿ ರೋವರ್ ಅನ್ನು ಇಳಿಸುವ ಮೂಲಕ ಇತಿಹಾಸ ನಿರ್ಮಿಸಿತ್ತು.

ದೆಹಲಿಯ ಭಾರತ ಮಂಟಪಂನಲ್ಲಿಂದು ನಡೆದ ಪ್ರಧಾನ ಕಾರ್ಯಕ್ರಮವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ರಾಷ್ಟ್ರಪತಿಗಳು, ಭಾರತ ಬಾಹ್ಯಾಕಾಶ ಕ್ಷೇತ್ರದಲ್ಲಿ ತನ್ನದೇ ಆದ ಸಾಧನೆ ಮಾಡುವ ಮೂಲಕ ಜಗತ್ತಿನ ಪ್ರಮುಖ ದೇಶಗಳ ಪಟ್ಟಿಗೆ ಸೇರಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಚಂದ್ರಯಾನ–3 ಯಶಸ್ವಿಯಾಗಿರುವುದರಿಂದ ಇಸ್ರೋದ ಸಂಶೋಧಕರು ಹಾಗೂ ವಿಜ್ಞಾನಿಗಳ ಪಾತ್ರ ಹಿರಿದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಪ್ರಗತಿಯತ್ತ ದಾಪುಗಾಲು ಹಾಕುತ್ತಿದ್ದು, ಖ್ಯಾತಿಯನ್ನು ಇನ್ನಷ್ಟು ಎತ್ತರಕ್ಕೆ ಕೊಡೊಯ್ಯಬೇಕು ಎಂದು ಇಸ್ರೋ ವಿಜ್ಞಾನಿಗಳಿಗೆ ಕರೆ ನೀಡಿದರು.

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಮಾತನಾಡಿ, ಭಾರತ ಚಂದ್ರಯಾನದಂತಹ ಮಹತ್ವಾಕಾಂಕ್ಷಿ ಯೋಜನೆಯಲ್ಲಿ ಸಫಲವಾಗುತ್ತದೆ ಎಂದು ಇಡೀ ವಿಶ್ವ ನಿರೀಕ್ಷಿಸಿರಲಿಲ್ಲ. ಆದರೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಬದ್ಧತೆ, ಇಸ್ರೋ ವಿಜ್ಞಾನಿಗಳು ಹಾಗೂ ಸಂಶೋಧಕರ ಪರಿಶ್ರಮದ ಫಲವಾಗಿ ನಾವು ಉನ್ನತ ಮಟ್ಟಕ್ಕೆ ಏರಿದ್ದೇವೆ. ಪ್ರಸ್ತುತ ಬಾಹ್ಯಾಕಾಶ ಕ್ಷೇತ್ರದ ಆರ್ಥಿಕತೆ 8 ಬಿಲಿಯನ್ ಡಾಲರ್‌ಗಳಾಗಿದ್ದು, ಮುಂದಿನ 10 ವರ್ಷಗಳಲ್ಲಿ ಅದು 44 ಬಿಲಿಯನ್‌ಗೆ ಹೆಚ್ಚಳವಾಗುವ ನಿರೀಕ್ಷೆ ಇದೆ ಎಂದು ಹೇಳಿದರು.

ಇಸ್ರೋ ಅಧ್ಯಕ್ಷ ಡಾ.ಎಸ್.ಸೋಮನಾಥ್ ಮಾತನಾಡಿ, ಕಳೆದ ವರ್ಷ ಆಗಸ್ಟ್ 23 ಭಾರತೀಯರೆಲ್ಲರಿಗೂ ಐತಿಹಾಸಿಕ ದಿನವಾಗಿದೆ. ಅಂದು ಚಂದ್ರಯಾನದ ಗುರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಯಿತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರೊಬೊಟಿಕ್ ತಂತ್ರಜ್ಞಾನ ಹಾಗೂ ಬಾಹ್ಯಕಾಶಕ್ಕೆ ಸಂಬಂಧಿಸಿದಂತೆ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ರಾಷ್ಟ್ರಪತಿಗಳು ಪ್ರಶಸ್ತಿ ನೀಡಿ ಗೌರವಿಸಿದರು.

***************

ಪ್ರಧಾನಿ ನರೇಂದ್ರ ಮೋದಿ ಅವರು ಪೋಲೆಂಡ್ ಪ್ರವಾಸ ಮುಗಿಸಿ ಇಂದು ಉಕ್ರೇನ್‌ನ ರಾಜಧಾನಿ ಕೀವ್ ತಲುಪಿದ್ದಾರೆ.

ಮೋದಿ ಅವರು, ಉಕ್ರೇನ್ ಅಧ್ಯಕ್ಷ ವ್ಲಾಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿ ಮಾಡಲಿದ್ದಾರೆ. ದ್ವಿಪಕ್ಷೀಯ ಸಹಕಾರ ಬಲಪಡಿಸಲು ಹಾಗೂ ಉಕ್ರೇನ್‌ನಲ್ಲಿ ಮುಂದುವರೆದಿರುವ ಸಂಘರ್ಷಕ್ಕೆ ಶಾಂತಿಯುತ ಪರಿಹಾರ ಕಂಡುಕೊಳ್ಳುವ ಬಗ್ಗೆ ತಮ್ಮ ದೃಷ್ಟಿಕೋನಗಳನ್ನು ಅಧ್ಯಕ್ಷ ಝೆಲೆನ್ಸ್ಕಿ

ಅವರೊಂದಿಗೆ ಹಂಚಿಕೊಳ್ಳುವ ಅವಕಾಶಗಳನ್ನು ಸೃಷ್ಟಿಸಲು ಎದುರು ನೋಡುತ್ತಿರುವುದಾಗಿ ಮೋದಿ ತಮ್ಮ ಪೋಲೆಂಡ್ ನಿರ್ಗಮನದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಶೀಘ್ರ ಮರಳುವಿಕೆಯನ್ನು ಭಾರತ ಆಶಿಸುತ್ತದೆ ಎಂದು ಹೇಳಿದ್ದಾರೆ. 1992ರಲ್ಲಿ ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳು ಆರಂಭಗೊಂಡ ನಂತರ ಭಾರತದ ಪ್ರಧಾನಿಯೊಬ್ಬರ ಮೊದಲ ಉಕ್ರೇನ್ ಭೇಟಿ ಇದಾಗಿದೆ.

ಪ್ರಧಾನಿ ಮೋದಿ, ಅಧ್ಯಕ್ಷ ಝುಲೆನ್ಸ್ಕಿ ಅವರು ಆರ್ಥಿಕ ಮತ್ತು ವ್ಯಾಪಾರ ಸಂಪರ್ಕಗಳು, ಕೃಷಿ ಮೂಲಸೌಕರ್ಯ, ಆರೋಗ್ಯ, ಶಿಕ್ಷಣ, ಔಷಧಗಳು, ರಕ್ಷಣೆ, ಸಂಸ್ಕೃತಿ ಹಾಗೂ ಜನರ ನಡುವಿನ ಸಂಬಂಧಗಳು ಸೇರಿದಂತೆ ದ್ವಿಪಕ್ಷೀಯ ಸಂಬಂಧ ಕುರಿತ ಎಲ್ಲ ಅಂಶಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ.

ಉಕ್ರೇನ್‌ನಲ್ಲಿ ನಡೆಯುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ಪ್ರಧಾನಿ ಅವರ ಈ ಭೇಟಿ ಚರ್ಚೆಯ ಭಾಗವಾಗಿದೆ. ರಾಜತಾಂತ್ರಿಕತೆ ಹಾಗೂ ಸಂವಾದದ ಮೂಲಕ ಸಮಸ್ಯೆ ಇತ್ಯರ್ಥಪಡಿಸಿಕೊಳ್ಳುವಂತೆ ಭಾರತ ಸತತವಾಗಿ ಪ್ರತಿಪಾದಿಸುತ್ತಿದೆ.

ಉಕ್ರೇನ್‌ಗೆ ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವದ ಭೇಟಿಯು ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆ ಹಾಗೂ ವಿಸ್ತರಣೆಗೆ ನೆರವಾಗಲಿದೆ ಎಂದು ಆಶಿಸಲಾಗಿದೆ.

***************

ಭಾರತ ಹಾಗೂ ಅಮೆರಿಕಾ ಸಹಜ ಮಿತ್ರ ರಾಷ್ಟ್ರಗಳಾಗಿದ್ದು, ಮುಂಬರುವ ದಿನಗಳಲ್ಲಿ ಬಲಿಷ್ಠ ಪಾಲುದಾರರಾಗಲು ಉದ್ದೇಶಿಸಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಅಮೆರಿಕಾದ ತಮ್ಮ ಅಧಿಕೃತ ನಾಲ್ಕು ದಿನಗಳ ಭೇಟಿಯ ಮೊದಲ ದಿನವಾದ ಇಂದು ವಾಷಿಂಗ್ಟನ್‌ನಲ್ಲಿ ಭಾರತೀಯ ಸಮುದಾಯದವರನ್ನು ಉದ್ದೇಶಿಸಿ ಮಾತನಾಡಿದ ಅವರು, ವಾಷಿಂಗ್ಟನ್ ಡಿಸಿಯಲ್ಲಿ ಭಾರತೀಯ ಸಮುದಾಯದೊಂದಿಗೆ ರಾಜನಾಥ್ ಸಿಂಗ್ ಉತ್ಸಾಹ ಭರಿತ ಸಂವಾದ ನಡೆಸಿದರು.

ಭಾರತೀಯ ಸಮುದಾಯ ತಮ್ಮ ಸಾಂಸ್ಕೃತಿಕ ಮೌಲ್ಯಗಳನ್ನು ಹೇಗೆ ಮುಂದುವರೆಸಿಕೊಂಡು ಬರುವುದರ ಜೊತೆಗೆ ತಮ್ಮ ಮೂಲ ಬೇರುಗಳೊಂದಿಗೆ ಹೊಂದಿರುವ ಸಂಪರ್ಕ ಹೃದಯ ಸ್ಪರ್ಶಿಯಾಗಿದೆ ಎಂದು ಹೇಳಿದರು.

ರಕ್ಷಣಾ ಸಚಿವರ ವಾಷಿಂಗ್ಟನ್ ಭೇಟಿಯ ಸಂದರ್ಭದಲ್ಲಿ ಭಾರತ ಮತ್ತು ಅಮೆರಿಕಾ ಸೆಕ್ಯೂರಿಟಿ ಆಫ್ ಸಪ್ಲೈಸ್ ಅರೆಂಜ್‌ಮೆಂಟ್ ಡಾಕ್ಯೂಮೆಂಟ್ – ಎಸ್‌ಓಎಸ್‌ಎ ಹಾಗೂ ಸಂಪರ್ಕ ಅಧಿಕಾರಿಗಳ ನಿಯೋಜನೆಗೆ ಸಂಬಂಧಿಸಿದ ಒಡಂಬಡಿಕೆಗೆ ಸಹಿ ಹಾಕಿದವು.

ಎಸ್‌ಓಎಸ್‌ಐಗೆ ಸಹಿ ಹಾಕುವುದರೊಂದಿಗೆ ರಾಷ್ಟ್ರೀಯ ರಕ್ಷಣೆಯನ್ನು ಉತ್ತೇಜಿಸುವ ಸರಕುಗಳು ಹಾಗೂ ಸೇವೆಗಳಿಗೆ ಆದ್ಯತೆಯ ಬೆಂಬಲ ಕಲ್ಪಿಸಲು ಭಾರತ–ಅಮೆರಿಕಾ ಸಮ್ಮತಿಸಿವೆ.

ರಾಷ್ಟ್ರೀಯ ಭದ್ರತಾ ಅಗತ್ಯಗಳನ್ನು ಪೂರೈಸಲು ನಿರೀಕ್ಷಿತ ಪೂರೈಕೆ ಸರಪಣಿ ಅಡೆತಡೆ ಪರಿಹರಿಸಲು ಪರಸ್ಪರ ಅಗತ್ಯವಿರುವ ಕೈಗಾರಿಕಾ ಸಂಪನ್ಮೂಲಗಳನ್ನು ಪಡೆದುಕೊಳ್ಳಲು ಅನುವು ಮಾಡಿಕೊಡುತ್ತದೆ.

ಅಮೆರಿಕಾದ ರಕ್ಷಣಾ ವ್ಯಾಪಾರ ಪಾಲುದಾರರೊಂದಿಗೆ ಪರಸ್ಪರ ಕಾರ್ಯ ಸಾಧ್ಯತೆಯನ್ನು ಬಲಪಡಿಸಲು, ಎಸ್‌ಓಎಸ್‌ಎ ಒಂದು ಪ್ರಮುಖ ಕಾರ್ಯ ವಿಧಾನವಾಗಿದೆ. ಭಾರತ, ಅಮೆರಿಕಾದ 18ನೇ ಎಸ್‌ಓಎಸ್‌ಎ ಪಾಲುದಾರನಾಗಿದ್ದು, ಇತರ ಪಾಲುದಾರರಲ್ಲಿ ಆಸ್ಟ್ರೇಲಿಯಾ, ಕೆನಡಾ, ಡೆನ್ಮಾರ್ಕ್, ಎಸ್ಟೋನಿಯಾ, ಫಿನ್‌ಲ್ಯಾಂಡ್, ಇಸ್ರೇಲ್, ಇಟಲಿ, ಜಪಾನ್, ಲ್ಯಾಟ್ವಿಯಾ, ಲಿಥುವೇನಿಯಾ, ನೆದರ್‌ಲ್ಯಾಂಡ್ಸ್, ನಾರ್ವೆ, ರಿಪಬ್ಲಿಕ್ ಆಫ್ ಕೊರಿಯಾ, ಸಿಂಗಾಪೂರ್, ಸ್ಪೇನ್, ಸ್ವೀಡನ್ ಹಾಗೂ ಬ್ರಿಟನ್ ದೇಶಗಳೂ ಸೇರಿವೆ.

ಅಮೆರಿಕದ ರಕ್ಷಣಾ ಕಾರ್ಯದರ್ಶಿ ಲಾಯ್ಡ್ ಆಸ್ಟಿನ್ ಅವರ ಆಹ್ವಾನದ ಮೇರೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ನಾಲ್ಕು ದಿನಗಳ ಭೇಟಿಗಾಗಿ ನಿನ್ನೆ ಸಂಜೆ ಅಮೆರಿಕಾದ ವಾಷಿಂಗ್ಟನ್ ತಲುಪಿದರು.

***************

ಭಾರತದ ಕಥೆಗಳು, ಸಂಸ್ಕೃತಿ, ಪರಂಪರೆ ಹಾಗೂ ಸಂಪ್ರದಾಯಗಳನ್ನು ಇಡೀ ಜಗತ್ತಿನೊಂದಿಗೆ ಹಂಚಿಕೊಳ್ಳುವುದಕ್ಕೆ ಸಂಬಂಧಿಸಿದಂತೆ ರೂಪಿತಗೊಂಡಿರುವ ಕ್ರಿಯೇಟ್ ಇನ್ ಇಂಡಿಯಾ ಯೋಜನೆಯ ಮೊದಲ ಆವೃತ್ತಿಯ ಸಮಾವೇಶ ನವದೆಹಲಿಯಲ್ಲಿ ನಡೆಯಿತು.

ಮೇಕ್ ಇನ್ ಇಂಡಿಯಾ ಯೋಜನೆಯಡಿ ಯುವ ಸಮೂಹ ಎದುರಿಸುತ್ತಿರುವ ಸವಾಲುಗಳ ಕುರಿತಂತೆ ನಡೆದ ಸಮಾವೇಶವನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಉದ್ಘಾಟಿಸಿದರು.

ಇದೇ ಸಂದರ್ಭದಲ್ಲಿ ಯೋಜನೆಯ ಚಟುವಟಿಕೆ ಕುರಿತು ವಿವರಿಸುವ ಹಾಗೂ ಎದುರಿಸುತ್ತಿರುವ 25 ಸವಾಲುಗಳನ್ನು ಒಳಗೊಂಡ ವಿಡಿಯೋ ಒಂದನ್ನು ಸಚಿವರು ಬಿಡುಗಡೆಗೊಳಿಸಿದರು.

ನಂತರ ಸಚಿವ ಅಶ್ವಿನಿ ವೈಷ್ಣವ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರು, ಕಳೆದ ಮಾರ್ಚ್ ತಿಂಗಳಿನಲ್ಲಿ ಕ್ರಿಯೇಟ್ ಇನ್ ಇಂಡಿಯಾದ ಕುರಿತು ಪ್ರಸ್ತಾಪಿಸಿದ್ದರು. ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ, ಯುವ ಸಮುದಾಯದ ಪಾಲುದಾರಿಕೆಯನ್ನು ಒತ್ತಿ ಹೇಳಿದ್ದ ಪ್ರಧಾನಿ, ಈ ಯೋಜನೆಯನ್ನು ಆರಂಭಿಸಿದ್ದಾರೆ. ಇದು ಭಾರತದ ಸಾಧನೆಗಳ ಬಗ್ಗೆ ತಿಳಿಯಲು ಕುತೂಹಲ ಹೊಂದಿರುವ ಜಾಗತಿಕ ಪ್ರೇಕ್ಷಕರನ್ನು ತೊಡಗಿಸಿಕೊಳ್ಳುವ ಹಾಗೂ ಭಾರತೀಯ ಮತ್ತು ವಿದೇಶಿ ಭಾಷೆಗಳಲ್ಲಿ ಡಿಜಿಟಲ್ ತಂತ್ರಜ್ಞಾನ ರೂಪಿಸುವ ಗುರಿ ಹೊಂದಿದೆ. ತಂತ್ರಜ್ಞಾನ ಹಾಗೂ ಮಾಧ್ಯಮ ಕ್ಷೇತ್ರಗಳಲ್ಲಿ ಅಪಾರ ಬದಲಾವಣೆಗಳಾಗಿದ್ದು, ಹೊಸ ಆವಿಷ್ಕಾರಗಳಿಗೆ ಸರ್ಕಾರ ಉತ್ತೇಜನ ನೀಡಲಿದೆ ಎಂದು ತಿಳಿಸಿದರು.

***************

ಅಮೆರಿಕಾದಲ್ಲಿ ರಿಪಬ್ಲಿಕನ್ ಪಕ್ಷದ ಪ್ರತಿಸ್ಪರ್ಧಿ ಡೊನಾಲ್ಡ್ ಟ್ರಂಪ್ ವಿರುದ್ಧ 2024ರ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸಲು ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ನಾಮನಿರ್ದೇಶನವನ್ನು ಉಪಾಧ್ಯಕ್ಷೆ ಕಮಲ ಹ್ಯಾರೀಸ್ ಔಪಚಾರಿಕವಾಗಿ ಅಂಗೀಕರಿಸಿದ್ದಾರೆ.

ನಾಲ್ಕು ದಿನಗಳ ಡೆಮಾಕ್ರೆಟಿಕ್ ರಾಷ್ಟ್ರೀಯ ಸಮಾವೇಶದ ಕೊನೆಯ ದಿನವಾದ ಇಂದು ಚಿಕಾಗೊದ ಯುನೈಟೆಡ್ ಸೆಂಟರ್‌ನಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಕಮಲ ಹ್ಯಾರೀಸ್, ಇದನ್ನು ದೃಢಪಡಿಸಿದ್ದಾರೆ.

ತಮ್ಮ ಭಾಷಣ ಸಮಯದಲ್ಲಿ ಕಮಲ ಹ್ಯಾರೀಸ್ ಅಮೆರಿಕನ್ನರನ್ನು ಒಂದುಗೂಡಿಸುವ ಹಾಗೂ ಅಮೆರಿಕಾದ ಭವಿಷ್ಯಕ್ಕಾಗಿ ಹೋರಾಡುವ ಅಧ್ಯಕ್ಷರಾಗಲು ಪ್ರತಿಜ್ಞೆ ಮಾಡಿದರು. ಭಾರತೀಯ ಮೂಲದ ಕಮಲ ಹ್ಯಾರೀಸ್ ಶ್ವೇತಭವನದ ಸ್ಪರ್ಧೆಯಿಂದ ಅಧ್ಯಕ್ಷ ಜೊ ಬೈಡನ್ ಹೊರ ಬಂದ ನಂತರ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿದ್ದಾರೆ.

ಒಂದೊಮ್ಮೆ ಅಧ್ಯಕ್ಷೀಯ ಚುನಾವಣೆಯಲ್ಲಿ ಆಕೆ ಯಶಸ್ವಿಯಾದರೆ ಕಮಲ ಹ್ಯಾರೀಸ್ ಅಮೆರಿಕಾದ ಮೊದಲ ಮಹಿಳಾ ಅಧ್ಯಕ್ಷರಾಗಲಿದ್ದಾರೆ.

***************

ಆಕಾಶವಾಣಿಯ ಮಹಾನಿರ್ದೇಶಕಿ ಮೌಶುಮಿ ಚಕ್ರವರ್ತಿ ಮತ್ತು ಹೆಚ್ಚುವರಿ ಮಹಾನಿರ್ದೇಶಕ ಎಲ್ ಮಧು ನಾಗ್ ಅವರು ನವದೆಹಲಿಯಲ್ಲಿ ಇಂದು ಆಕಾಶವಾಣಿ ಆವರಣದಲ್ಲಿ ಏಕ್ ಪೇಡ್ ಮಾ ಕೆ ನಾಮ್ ಎಂಬ ಉಪಕ್ರಮದಡಿ ಸಸಿಗಳನ್ನು ನೆಟ್ಟರು. ಆಕಾಶವಾಣಿಯ ಇತರ ಅಧಿಕಾರಿಗಳು ಸಹ ಈ ಸಂದರ್ಭದಲ್ಲಿ ಸಸಿಗಳನ್ನು ನೆಟ್ಟರು.

ವಿಶ್ವ ಪರಿಸರ ದಿನದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನ ಆರಂಭಿಸಿದ್ದರು. ದೇಶಾದ್ಯಂತ ನಡೆಯುತ್ತಿರುವ ಅಭಿಯಾನದಲ್ಲಿ ಜನರು ಉತ್ಸಾಹದಿಂದ ಭಾಗವಹಿಸುತ್ತಿದ್ದಾರೆ.

***************

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ಇದೇ 25, ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್ ಕಾರ್ಯಕ್ರಮದ 113ನೇ ಆವೃತ್ತಿಯಾಗಿದ್ದು, ಜನರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು "ಮೈ ಜಿ.ಒ.ವಿ. ಓಪನ್ ಫೋರ", "ನಮೋ ಆ್ಯಪ್" ಅಥವಾ ಉಚಿತ ಸಹಾಯವಾಣಿ ಸಂಖ್ಯೆ 1800–11–7800 ಮೂಲಕ, ಹಂಚಿಕೊಳ್ಳಬಹುದು.

ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರವಾಗಲಿದೆ. ಅಲ್ಲದೇ ಎಐಆರ್ ನ್ಯೂಸ್, ಡಿಡಿನ್ಯೂಸ್, ಪಿಎಂಒ ಮತ್ತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನಲ್‌ಗಳಲ್ಲಿ ನೇರ ಪ್ರಸಾರ ಬಿತ್ತರವಾಗಲಿದೆ.

ಮನ್ ಕಿ ಬಾತ್ ಕಾರ್ಯಕ್ರಮದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

***************

ಭಾರತ ಮತ್ತು ಇಂಗ್ಲೆಂಡ್ ದೇಶಗಳ ನಡುವಣ ಮೊದಲ ಮಹಿಳಾ ಟೆಸ್ಟ್ ಕ್ರಿಕೆಟ್ ಪಂದ್ಯ 2026ರಲ್ಲಿ, ಲಾರ್ಡ್ಸ್‌ನ ಕ್ರಿಕೆಟ್ ಮೈದಾನದಲ್ಲಿ ಆಯೋಜಿಸಲಾಗುವುದು ಎಂದು ಇಂಗ್ಲೆಂಡ್ ಹಾಗೂ ವೇಲ್ಸ್ ಕ್ರಿಕೆಟ್ ಮಂಡಳಿ–ಇಸಿಬಿ ಖಚಿತಪಡಿಸಿದೆ.

ಈ ಸಂಬಂಧ ತನ್ನ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಹೇಳಿಕೆಯಲ್ಲಿ ಇಸಿಬಿಯ ಮುಖ್ಯ ಕಾರ್ಯನಿರ್ವಹಾಧಿಕಾರಿ ರಿಚರ್ಡ್‌ಗೋಲ್ಡ್, 2026ರಲ್ಲಿ ಲಾರ್ಡ್ಸ್‌ನಲ್ಲಿ ಆಯೋಜಿಸಲಾಗುವ ಮೊದಲ ಮಹಿಳಾ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ಮಹಿಳೆಯರನ್ನು ಎದುರಿಸಲು ಭಾರತದ ಮಹಿಳೆಯರು ಆಗಮಿಸುತ್ತಿವೆ ಎಂದು ಖಚಿತಪಡಿಸಲು ಸಂತೋಷವಾಗಿದೆ ಎಂದು ಹೇಳಿದ್ದಾರೆ.

ಇದೊಂದು ವಿಶೇಷ ಸಂದರ್ಭವಾಗಿದ್ದು, ಅತ್ಯಂತ ಮಹತ್ವದ್ದಾಗಿದೆ ಎಂದು ಗೋಲ್ಡ್ ಹೇಳಿದ್ದಾರೆ. ಈ ನಡುವೆ ಭಾರತ ಮಹಿಳಾ ತಂಡವು ಮುಂದಿನ ವರ್ಷದ ಮಧ್ಯದಲ್ಲಿ ಕೈಗೊಳ್ಳಲಿರುವ ಇಂಗ್ಲೆಂಡ್ ಪ್ರವಾಸದಲ್ಲಿ 5 ಟಿ–20, ಮೂರು ಏಕದಿನ ಕ್ರಿಕೆಟ್ ಪಂದ್ಯ ಆಡಲಿದೆ.

***************

ಪ್ಯಾರಿಸ್ ಒಲಿಂಪಿಕ್ಸ್ ಬೆಳ್ಳಿ ಪದಕ ವಿಜೇತ ನೀರಜ್ ಚೋಪ್ರಾ ಕಳೆದ ರಾತ್ರಿ ಸ್ವಿಟ್ಜರ್ಲೆಂಡ್‌ನಲ್ಲಿ ನಡೆದ ಲೌಸನ್ನೆ ಡೈಮಂಡ್ ಲೀಗ್ 2024ರ ಪುರುಷರ ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ಎರಡನೇ ಸ್ಥಾನ ಪಡೆದುಕೊಂಡಿದ್ದಾರೆ.

ಭಾರತೀಯ ತಾರಾ ಅಥ್ಲೀಟ್ ತಮ್ಮ ಅಂತಿಮ ಪ್ರಯತ್ನದಲ್ಲಿ, 90.61 ಮೀಟರ್ ತಲುಪಿದ ಪೀಟರ್ಸ್ ಆಂಡರ್ಸನ್ ನಂತರ 89.49 ಮೀಟರ್ ಎಸೆದು ಎರಡನೇ ಸ್ಥಾನ ತಲುಪಿದರು.

*******ಮುಕ್ತಾಯ*******